ಅನುಸೂಚಿತ ಜಾತಿ ಹಾಗೂ ಅನುಸೂಚಿತ ಆದಿಮ ಜಾತಿ ನೌಕರರಿಗೆ ನೀಡುತ್ತಿರುವ ಕಿರುಕುಳ.

(೧೧೫೩) ಶ್ರೀ ಗೋಪಾಲ ಮುಕುಂದ ಕಾನಡೆ (ಶಿರ್ಸಿ).—ಮಾನ್ಯ ಮೀನುಗಾರಿಕೆ ಹಾಗೂ ಬಂದರು ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮೀನುಗಾರಿಕೆ ಇಲಾಖೆಯ ಅನುಸೂಚಿತ ಜಾತಿ ಅನುಸೂಚಿತ ಆದಿಮ ಜಾತಿ ನೌಕರರಿಗೆ ಉಂಟಾಗುತ್ತಿರುವ ಅನ್ಯಾಯದ ಪ್ರಸಂಗಗಳೇನಾದರೂ ಸರ್ಕಾರದ ಗಮನಕ್ಕೆ ಬಂದಿದೆಯೆ ?

ಆ) ಹಾಗಿದ್ದಲ್ಲಿ ಅಂತಹ ಪ್ರಸಂಗಗಳಾವುವು ಹಾಗೂ ಅವುಗಳನ್ನು ತಡೆಯಲು ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಶ್ರೀ ಸಿ. ಬೈರೇಗೌಡ (ಮೀನುಗಾರಿಕೆ ಮತ್ತು ಬಂದರು ಸಚಿವರು).—

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಮೀನುಗಾರಿಕೆ ಇಲಾಖೆಯ ಅಧಿಕಾರಿಗಳ ವಿರುದ್ಧ ಅಪಾದನೆಗಳು.

೧೧೫೪ ಶ್ರೀ ಗೋಪಾಲ ಮುಕುಂದ ಕಾನಡೆ (ಶಿರ್ಸಿ).—ಮಾನ್ಯ ಮೀನುಗಾರಿಕೆ ಹಾಗೂ ಬಂದರು ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಮೀನುಗಾರಿಕೆ ಇಲಾಖೆಯಲ್ಲಿನ ಅಧಿಕಾರಿಗಳ ವಿರುದ್ಧ ಭ್ರಷ್ಟಾಚಾರದ ಅಪಾದನೆಗಳೇನಾದರೂ ಇವೆಯೆ ?

ಆ) ಹಾಗಿದ್ದಲ್ಲಿ, ಅವು ಯಾವುವು, ಅಪಾದನೆಗಳಿರುವ ಅಧಿಕಾರಿಗಳ ಹೆಸರು ಹುದ್ದೆ ಮುಂತಾದ ವುಗಳ ಪೂರ್ಣ ವಿವರ ಒದಗಿಸುವುದು.

ಇ) ಭ್ರಷ್ಟಾಚಾರದ ಅಪಾದನೆಗಳನ್ನು ಎದುರಿಸುತ್ತಿರುವ ಅಧಿಕಾರಿಗಳ ವಿರುದ್ಧ ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಶ್ರೀ ಸಿ. ಬೈರೇಗೌಡ (ಮೀನುಗಾರಿಕೆ ಮತ್ತು ಬಂದರು ಸಚಿವರು).—

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಮೀನುಗಾರಿಕೆ ಇಲಾಖೆ ಅನುಸೂಚಿತ ಜಾತಿ ಅನುಸೂಚಿತ ಆದಿಮ ಜಾತಿ ನೌಕರರ ಕ್ಷೇಮಾಭಿವೃದ್ಧಿ ಸಂಘ

೧೧೫೫ ಶ್ರೀ ಗೋಪಾಲ ಮುಂಕುಂದ ಕಾನಡೆ (ಶಿರ್ಸಿ).—ಮಾನ್ಯ ಮೀನುಗಾರಿಕೆ ಹಾಗೂ ಬಂದರು ಮಂತ್ರಿಗಳು ಈ ಕೆಳ ಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯ ಮೀನುಗಾರಿಕೆ ಇಲಾಖೆಯಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಆದಿಮ ಜಾತಿ ನೌಕರರ ಸಂಘವಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ?

ಆ) ಹಾಗಾದಲ್ಲಿ ಸದರಿ ಸಂಘದವರು ಸರ್ಕಾರದವರಿಗೆ ಬೇಡಿಕೆಗಳನ್ನು ಸಲ್ಲಿಸಿದ್ದಾರೆಯೆ ?

ಇ) ಹಾಗಿದ್ದಲ್ಲಿ, ಆ ಬೇಡಿಕೆಗಳಾವುವು ? ಹಾಗೂ ಬೇಡಿಕೆಗಳನ್ನು ಸರ್ಕಾರದವರು ಈತ್ಯರ್ಥ ಗೊಳಿಸಿರುವಿರಾ ?

ಈ) ಈ ಬೇಡಿಕೆಗಳನ್ನು ಈಡೇರಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು ?